

# ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (NRHM)



ಸಾರ್ವಜನಿಕ ಹಿತಾಸಕ್ತಿಗಾಗಿ ಪ್ರಕಟಣೆ :
ಕರ್ನಾಟಕ ರೀಜನಲ್ ಆರ್ಗನೈಝೇಷನ್ ಫಾರ್
ಸೋಶಿಯಲ್ ಸರ್ವೀಸ್ (ಕ್ರಾಸ್)
ಬೆಂಗಳೂರು – 560084

ಪ್ರಕಾಶನಕ್ಕೆ ಸಹಕಾರ
ಕಾರಿಥಾಸ್ ಇಂಡಿಯಾ, ನವದೆಹಲಿ

Caritas INDIA
The Joy of Service...

# ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (NRHM)

ಉತ್ತಮ ಆರೋಗ್ಯವನ್ನು ಹೊಂದುವುದು ಸಮುದಾಯದ ಹಕ್ಕು. ಇದಕ್ಕೆ ಪೂರಕವಾದ ಆರೋಗ್ಯದ ಸೌಲಭ್ಯಗಳನ್ನು ಒದಗಿಸುವುದು ಸರಕಾರದ ಜವಾಬ್ದಾರಿ. ಆದರೆ ನಮ್ಮ ಗ್ರಾಮೀಣ ಪ್ರದೇಶದಲ್ಲಿ ಜನರ ಆರೋಗ್ಯದ ಪರಿಸ್ಥಿತಿ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿರುವುದನ್ನು ನಾವು ಗಮನಿಸುತ್ತಿದ್ದೇವೆ. ಇದಕ್ಕೆ ಹಲವು ಕಾರಣಗಳಿವೆ. ಪ್ರಮುಖವಾಗಿ ಗ್ರಾಮೀಣ ಪ್ರದೇಶದಲ್ಲಿ ಜನರಿಗೆ ಆರೋಗ್ಯ ಸೇವೆಗಳನ್ನು ಪರಿಪೂರ್ಣವಾಗಿ ಒದಗಿಸಲು ಸಾಧ್ಯವಾಗುತ್ತಿಲ್ಲ. ಈ ಕೊರತೆಯನ್ನು ನೀಗಿಸಬೇಕು, ಜನರ ಆರೋಗ್ಯದ ಹಕ್ಕು ಅವರಿಗೆ ಲಭ್ಯವಾಗಬೇಕು, ಈ ನಿಟ್ಟಿನಲ್ಲಿ ಸಮುದಾಯ, ಸರಕಾರ ಮತ್ತು ಜನ ಸಂಘಟನೆಗಳ ಸಂಘಟಿತ ಪ್ರಯತ್ನ ನಡೆಯಬೇಕು. ಈ ಉದ್ದೇಶದಿಂದ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಕಾರ್ಯಕ್ರಮವನ್ನು ಕೇಂದ್ರ ಸರಕಾರ ಜಾರಿಗೊಳಿಸಿದೆ.

## ಅಭಿಯಾನದ ಉದ್ದೇಶಗಳು

ಗ್ರಾಮೀಣ ಜನರ ಆರೋಗ್ಯದ ಪರಿಸ್ಥಿತಿಯನ್ನು ಗಣನೀಯವಾಗಿ ಸುಧಾರಿಸುವ ಪ್ರಮುಖ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ ಪ್ರಮುಖ ಉದ್ದೇಶಗಳು ಹೀಗಿವೆ:

1. ಒಟ್ಟಾರೆಯಾಗಿ ದೇಶದ ಆರೋಗ್ಯ ಪರಿಸ್ಥಿತಿಯಲ್ಲಿ ಸುಧಾರಣೆ ತರುವುದು : ಈ ನಿಟ್ಟಿನಲ್ಲಿ ಗ್ರಾಮೀಣ ಪ್ರದೇಶದ ಜನರ ಆರೋಗ್ಯ ಪರಿಸ್ಥಿತಿಯ ಸುಧಾರಣೆಗೆ ಶ್ರಮಿಸುವುದು.



2. ಸಾರ್ವಜನಿಕರಿಗೆ ಅದರಲ್ಲೂ ಮುಖ್ಯವಾಗಿ ಬಡವರಿಗೆ, **ಹಿಂದುಳಿದವರಿಗೆ ಮತ್ತು ಮಹಿಳೆಯರಿಗೆ** ಉತ್ತಮ ಗುಣಮಟ್ಟದ ಆರೋಗ್ಯ ಸೇವೆಗಳು ಸಿಗುವಂತೆ ಮಾಡುವುದು.
3. ಆರೋಗ್ಯ ಸೇವೆಗಳಲ್ಲಿ ಸುಧಾರಣೆ ತರುವ ನಿಟ್ಟಿನಲ್ಲಿ ಹಾಗೂ ರಾಜ್ಯ ಸರಕಾರಗಳು ಪಾಲುದಾರಿಕೆಯನ್ನು ಹೊಂದುವಂತೆ ಮಾಡುವುದು.
4. ಪ್ರಾಥಮಿಕ ಆರೋಗ್ಯ ಕಾರ್ಯಕ್ರಮಗಳು ಮತ್ತು ಮೂಲ ಸೌಕರ್ಯಗಳ ನಿರ್ವಹಣೆಯಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಸಮುದಾಯ ಭಾಗಿಗಳಾಗುವಂತೆ ನೋಡಿಕೊಳ್ಳುವುದು.
5. ಆರೋಗ್ಯದ ಅಗತ್ಯಗಳನ್ನು ಸ್ಥಳೀಯವಾಗಿ ಪೂರೈಸಿಕೊಳ್ಳಲು ಅವಕಾಶ ಕಲ್ಪಿಸುವುದು.
6. ವಿವಿಧ ರೀತಿಯ ಆರೋಗ್ಯ ಸೇವೆಗಳನ್ನು ಒಟ್ಟುಗೂಡಿಸಿ ಜಾರಿಗೊಳಸುವುದು.
7. ಸ್ಥಳೀಯ ಆರೋಗ್ಯ ಪದ್ಧತಿಗಳನ್ನು ವೈಜ್ಞಾನಿಕವಾಗಿ ಅರ್ಥೈಸಿಕೊಂಡು ಬಳಸಿಕೊಳ್ಳುವುದು.
8. ಆರೋಗ್ಯ ಉಪಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ತಾಲ್ಲೂಕು ಮಟ್ಟದಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಗಳ ಸಾಮರ್ಥ್ಯವನ್ನು ಅಭಿವೃದ್ಧಿ ಪಡಿಸುವುದು.
9. ಸಾರ್ವಜನಿಕ ಆರೋಗ್ಯ ಸೇವೆಗಳನ್ನು ನೂರಕ್ಕೆ ನೂರು ಮಂದಿ ಬಳಸಿಕೊಳ್ಳುವಂತೆ ನೋಡಿಕೊಳ್ಳವುದು.

10. ಜಿಲ್ಲಾ ಮಟ್ಟದಲ್ಲಿ ಆರೋಗ್ಯ ಯೋಜನೆಯನ್ನು ರೂಪಿಸುವುದು ಮತ್ತು ಈ ಯೋಜನೆಯಲ್ಲಿ ನೈರ್ಮಲ್ಯ ಕಾರ್ಯಕ್ರಮಗಳನ್ನು ಸೇರಿಸಿಕೊಳ್ಳುವುದು.
11. ಕಾಯಿಲೆಗಳು ಬರದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು.
12. ರೋಗ ನಿಯಂತ್ರಣ ಕಾರ್ಯಕ್ರಮಗಳನ್ನು ಬಲಪಡಿಸುವುದು.
13. ಆರೋಗ್ಯ ಪರಿಸ್ಥಿತಿಯ ಸುಧಾರಣೆಯಲ್ಲಿ ಸರಕಾರಿ ಮತ್ತು ಖಾಸಗಿ ವಲಯಗಳು ಕೈಜೋಡಿಸುವಂತೆ ಮಾಡುವುದು.
14. ಆರೋಗ್ಯ ಕಾರ್ಯಕ್ರಮಗಳಿಗಾಗಿ ವಿಶೇಷವಾಗಿ ಹಣಕಾಸು ವ್ಯವಸ್ಥೆಯನ್ನು ಮಾಡುವುದು.
15. ಮೇಲಿನ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅಗತ್ಯವಿರುವ ಸಾಂಸ್ಥಿಕ ವ್ಯವಸ್ಥೆಯನ್ನು ರೂಪಿಸುವುದು.

ಮೇಲಿನ ಎಲ್ಲಾ ಉದ್ದೇಶಗಳನ್ನು ಗ್ರಾಮೀಣ ಪ್ರದೇಶಗಳಲ್ಲಿ ಪರಿಣಾಮಕಾರಿಯಾಗಿ ಜಾರಿಯಾಗಬೇಕು. ಜನರಲ್ಲಿ ಆರೋಗ್ಯದ ಕುರಿತು ಜಾಗೃತಿ ಮೂಡಬೇಕು. ಆರೋಗ್ಯದ ಸೌಲಭ್ಯಗಳು ಮತ್ತು ಸೇವೆಗಳು ಸಾರ್ವಜನಿಕರಿಗೆ ಲಭ್ಯವಾಗಬೇಕು. ಆರೋಗ್ಯದ ವಿಷಯದಲ್ಲಿ ಸಾಮಾಜಿಕ ತಾರತಮ್ಯ ಹೋಗಬೇಕು. ಈ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಗಳು ವಿಶೇಷ ಗಮನ ನೀಡಿ ಕಾರ್ಯ ಪ್ರವೃತ್ತರಾಗಬೇಕು. ಅದಕ್ಕಾಗಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದಲ್ಲಿ ಅವಕಾಶವನ್ನು ಕಲ್ಪಿಸಲಾಗಿದೆ.

## ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿ

ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ ತಳಮಟ್ಟದಲ್ಲಿ ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಗಳು ಇವೆ. ಈ ಸಮಿತಿಗಳು ನೇರವಾಗಿ ಗ್ರಾಮ ಪಂಚಾಯಿತಿಯ ಕಾರ್ಯ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸಬೇಕಾಗಿದೆ. ಪ್ರತಿಯೊಂದು ಗ್ರಾಮ ಪಂಚಾಯಿತಿಯಲ್ಲಿ 1,000 ಜನಸಂಖ್ಯೆಯನ್ನು ಮೀರಿದ ಕಂದಾಯ ಗ್ರಾಮಗಳಿಗೆ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಗಳ ರಚನೆ ಮಾಡಬೇಕಿದೆ. ಈ ಸಮಿತಿಗಳ ರಚನೆಯ ಉದ್ದೇಶಗಳು ಹೀಗಿವೆ:



- ಗ್ರಾಮ ಪಂಚಾಯಿತಿಯ ಸಹಕಾರ ಮತ್ತು ಸಮನ್ವಯದೊಂದಿಗೆ ಸಮುದಾಯದಲ್ಲಿ ಆರೋಗ್ಯದ ಬಗ್ಗೆ ತಿಳುವಳಿಕೆ ಮೂಡಿಸುವುದು.
- ಆರೋಗ್ಯ ಸೇವೆಗಳನ್ನು ಪಡೆಯುವ ಮೂಲಕ ಆರೋಗ್ಯ ಪರಿಸ್ಥಿತಿಯಲ್ಲಿ ಸುಧಾರಣೆ ತರುವುದು.
- ಅಭಿವೃದ್ಧಿಗೂ ಆರೋಗ್ಯಕ್ಕೂ ಇರುವ ಸಂಬಂಧವನ್ನು ಜನರಿಗೆ ಮನವರಿಕೆ ಮಾಡುವುದು.
- ಆರೋಗ್ಯ ಪರಿಸ್ಥಿತಿಯ ಸುಧಾರಣೆಯ ಪ್ರಯತ್ನದಲ್ಲಿ ಜನರ ಭಾಗವಹಿಸುವಿಕೆಯನ್ನು ಹೆಚ್ಚಿಸುವುದು.
- ಹೆಚ್.ಐ.ವಿ./ಏಡ್ಸ್ ಮತ್ತಿತರ ಸೋಂಕುಗಳನ್ನು ತಡೆಗಟ್ಟುವ ಕಾರ್ಯದಲ್ಲಿ ಜನರಿಗೆ ತಿಳುವಳಿಕೆ ನೀಡುವುದು.
- ತಮ್ಮ ಗ್ರಾಮದ ಅರೋಗ್ಯ ಪರಿಸ್ಥಿತಿಯ ಸುಧಾರಣೆಗೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸುವುದು.
- ಗ್ರಾಮದ ಜನರಿಗೆ ಶುದ್ಧವಾದ ಕುಡಿಯುವ ನೀರು ಲಭ್ಯವಾಗುವುದನ್ನು ಖಾತರಿ ಪಡಿಸುವುದು.
- ಗ್ರಾಮದಲ್ಲಿನ ನೈರ್ಮಲ್ಯ ಪರಿಸ್ಥಿತಿಯನ್ನು ಸುಧಾರಿಸುವುದು ಮತ್ತು ಎಲ್ಲಾ ಕುಟುಂಬಗಳು ಶೌಚಾಲಯವನ್ನು ಹೊಂದುವಂತೆ ನೋಡಿಕೊಳ್ಳುವುದು.

- ಸಾಂಕ್ರಾಮಿಕ ರೋಗಗಳ ನಿವಾರಣೆಗೆ ನೀಡಲಾಗುತ್ತಿರುವ ಸಾರ್ವತ್ರಿಕ ಚುಚ್ಚುಮದ್ದು ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸುವುದು.
- ಆರೋಗ್ಯ ಸಹಾಯಕರು ನಿಯಮಿತವಾಗಿ ಗ್ರಾಮಗಳಿಗೆ ಭೇಟಿ ನೀಡಿ ಸಮುದಾಯಕ್ಕೆ ಆರೋಗ್ಯ ಸೇವೆಗಳು ಮತ್ತು ಸೌಲಭ್ಯಗಳ ಮಾಹಿತಿಯನ್ನು ನೀಡುವಂತೆ ನೋಡಿಕೊಳ್ಳುವುದು.
- ಗರ್ಭಿಣಿ ಮಹಿಳೆಯರು ತುರ್ತಾಗಿ ಆಸ್ಪತ್ರೆಗೆ ಹೋಗಬೇಕಾದಾಗ ಅವಶ್ಯಕತೆಗನುಗುಣವಾಗಿ ವಾಹನ ಸೌಲಭ್ಯವನ್ನು ಒದಗಿಸುವುದು.
- 100ಕ್ಕೆ 100 ಹೆರಿಗೆಗಳು ಆಸ್ಪತ್ರೆಯಲ್ಲೇ ಆಗುವಂತೆ ನೋಡಿಕೊಳ್ಳುವುದು.

ಮೇಲಿನ ಪ್ರಮುಖ ಉದ್ದೇಶಗಳನ್ನು ಮತ್ತು ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಜಾರಿಗೊಳಿಸಲು ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿ ಹೆಚ್ಚಿನ ಆಸಕ್ತಿ ವಹಿಸಿ ಕೆಲಸ ಮಾಡಬೇಕಾಗಿದೆ. ಈ ಸಮಿತಿಗೆ ಗ್ರಾಮ ಪಂಚಾಯಿತಿ ಬೆಂಬಲ ನೀಡಿದಲ್ಲಿ ಮಾತ್ರ ಈ ಕಾರ್ಯ ಸಾಧ್ಯವಾಗುತ್ತದೆ.

## ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಯ ರಚನೆ

- ಒಟ್ಟು ಸದಸ್ಯರ ಸಂಖ್ಯೆ – 15– ಈ ಸದಸ್ಯರನ್ನು ಗ್ರಾಮ ಸಭೆಯು ಆಯ್ಕೆ ಮಾಡಬೇಕು.
- 15 ಜನರಲ್ಲಿ 8 ಮಂದಿ ಮಹಿಳೆಯರಾಗಿರಬೇಕು. ಈ ಪೈಕಿ ಕನಿಷ್ಠ ಮೂವರು ಪರಿಶಿಷ್ಠ ಜಾತಿ ಮತ್ತು ಪಂಗಡದವರಾಗಿರಬೇಕು, ಇಬ್ಬರು ಸ್ವ–ಸಹಾರ ಗುಂಪುಗಳ ಪ್ರತಿನಿಧಿಗಳಾಗಿರಬೇಕು.
- ಉಳಿದ 7 ಸದಸ್ಯರಲ್ಲಿ ಕನಿಷ್ಠ ಇಬ್ಬರು ಪರಿಶಿಷ್ಠ ಜಾತಿ ಮತ್ತು ಪಂಗಡದವರಾಗಿರಬೇಕು.
- ಸ್ಥಳೀಯ ಗ್ರಾಮ ಪಂಚಾಯಿತಿಯ ಸದಸ್ಯರು ಸಮಿತಿಯ ಅಧ್ಯಕ್ಷರಾಗಿರುತ್ತಾರೆ. ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಆ ಗ್ರಾಮದ ಸದಸ್ಯರಾಗಿದ್ದಲ್ಲಿ ಅವರೇ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಯ ಅಧ್ಯಕ್ಷರಾಗಬೇಕು.
- ಆಯಾ ಗ್ರಾಮದ ಕಿರಿಯ ಮಹಿಳಾ ಆರೋಗ್ಯ ಸಹಾಯಕಿ, ಕಿರಿಯ ಪುರುಷ ಆರೋಗ್ಯ ಸಹಾಯಕ, ಪ್ರಾಥಮಿಕ ಶಾಲಾ ಶಿಕ್ಷಕರು (ಮಹಿಳೆಯರಿಗೆ ಆದ್ಯತೆ), ಗ್ರಾಮದಲ್ಲಿರುವ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ ಕಾರ್ಯಕರ್ತೆಯರು ಈ ಸಮಿತಿಯ ಪದನಿಮಿತ್ತ ಸದಸ್ಯರಾಗಿತ್ತಾರೆ.
- ಆ ಗ್ರಾಮದಲ್ಲಿ ಒಬ್ಬರಿಗಿಂತ ಹೆಚ್ಚು ಗ್ರಾಮ ಪಂಚಾಯಿತಿಯ ಸದಸ್ಯರಿದ್ದಲ್ಲಿ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯು ಅವರ ಪೈಕಿ ಒಬ್ಬರನ್ನು ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಯ ಅಧ್ಯಕ್ಷರನ್ನಾಗಿ ನಾಮ ನಿರ್ದೇಶನ ಮಾಡಬೇಕು. ಗ್ರಾಮ ಪಂಚಾಯಿತಿ ನಾಮ ನಿರ್ದೇಶನ ಮಾಡಲು ವಿಫಲವಾದಲ್ಲಿ ಮಾತ್ರ ಅಧ್ಯಕ್ಷರನ್ನು ನಾಮ ನಿರ್ದೇಶನ ಮಾಡುವ ಅಧಿಕಾರವನ್ನು ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿಗೆ ನೀಡಲಾಗಿದೆ.
- ಸ್ಥಳಿಯ ಗ್ರಾಮದ ಆಶಾ ಕಾರ್ಯಕರ್ತೆ ಸಮಿತಿಯ ಕಾರ್ಯದಶಿಯಾಗಿ ಕೆಲಸ ನಿರ್ವಹಿಸಬೇಕು. ಆಶಾ ಕಾರ್ಯಕರ್ತೆ ಆಯ್ಕೆ ಆಗಿಲ್ಲದ ಸಂದರ್ಭದಲ್ಲಿ ಮಾತ್ರ ಆ ಗ್ರಾಮದಲ್ಲಿರುವ ಅಂಗನವಾಡಿ ಕಾರ್ಯಕರ್ತರ ಪೈಕಿ ಹಿರಿತನ ಮತ್ತು ಅರ್ಹತೆಯ ಮೇಲೆ ಒಬ್ಬರನ್ನು ಕಾರ್ಯದರ್ಶಿಯಾಗಿ ಆಯ್ಕೆ ಮಾಡಬಹುದು.

## ಸದಸ್ಯತ್ವದ ಅವಧಿ

- 15 ಜನ ಸದಸ್ಯರ ಪೈಕಿ ಪ್ರತಿ ವರ್ಷಕ್ಕೆ 5 ಜನರನ್ನು ಲಾಟರಿ ಎತ್ತುವ ಮೂಲಕ ನಿವೃತ್ತಿಗೊಳಿಸಿ ಅವರ ಸ್ಥಾನಕ್ಕೆ ಹೊಸಬರನ್ನು ಆಯ್ಕೆ ಮಾಡಬೇಕು. ಹೊಸ ಸದಸ್ಯರ ಆಯ್ಕೆ ಗ್ರಾಮ ಸಭೆಯಲ್ಲೇ ಆಗಬೇಕು. ಹೊಸಬರನ್ನು ಆಯ್ಕೆ ಮಾಡುವಾಗಲೂ ನಿವೃತ್ತಿ ಹೊಂದಿದ ವರ್ಗಗಳ ಸದಸ್ಯರನ್ನೇ ಆಯ್ಕೆ ಮಾಡಬೇಕು.
- ಪ್ರತಿ ವರ್ಷ ಸದಸ್ಯರ ನಿವೃತ್ತಿ ಮತ್ತು ಆಯ್ಕೆ ಪ್ರಕ್ರಿಯೆಯ ಮೇಲ್ವಿಚಾರಣೆಯನ್ನು ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ , ಕಾರ್ಯದರ್ಶಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದು ನಡೆಸಬೇಕು.

## ಸಮಿತಿಯ ಸಭೆ

- ಗ್ರಾಮ ಆರೋಗ್ಯ ನೈರ್ಮಲ್ಯ ಸಮಿತಿಯ ಸಭೆಯನ್ನು ಪ್ರತಿ ತಿಂಗಳು ನಡೆಸಬೇಕು. ಗ್ರಾಮ ಪಂಚಾಯಿತಿ ಕಛೇರಿ, ಅಂಗನವಾಡಿ ಕೇಂದ್ರ ಅಥವಾ ಶಾಲಾ ಕೊಠಡಿಗಳಲ್ಲಿ ಈ ಸಭೆಯನ್ನು ನಡೆಸಬಹುದು. ತುರ್ತು ಸಂದರ್ಭದಲ್ಲಿ ವಿಶೇಷ ಸಭೆಯನ್ನು ಕರೆಯಬಹುದು.

## ಸಭೆಯ ಕೋರಂ

- ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಯ ಸಾಮಾನ್ಯ ಸಭೆಯ ಕೋರಂ ಒಟ್ಟು ಸದಸ್ಯರ 1/3 ಭಾಗ ಅಗಿರುತ್ತದೆ. ಭಾಗವಹಿಸಿದ ಸದಸ್ಯರಲ್ಲಿ ಕನಿಷ್ಠ 1/3 ಭಾಗ ಮಹಿಳೆಯರು ಇರಬೇಕು.
- ನಿಗಧಿತ ಸಭೆಯ ದಿನದಂದು ಅಧ್ಯಕ್ಷರು ಗೈರು ಹಾಜರಾದಲ್ಲಿ ಸಭೆಯಲ್ಲಿ ಭಾಗವಹಿಸಿದ ಸದಸ್ಯರೊಬ್ಬರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಬಹುದು.
- ಸಭೆಯ ನಿರ್ಣಯಗಳು ಮತ್ತು ದಾಖಲೆಗಳನ್ನು ಅಧಿಕೃತ ಪುಸ್ತಕದಲ್ಲಿ ದಾಖಲಿಸುವ ಕಾರ್ಯವನ್ನು ಸಮಿತಿಯ ಕಾರ್ಯದರ್ಶಿ (ಆಶಾ ಸಮಿತಿಯ ಕಾರ್ಯಕರ್ತೆ) ಮಾಡಬೇಕು.



ಮಾಹಿತಿ ಕೃಪೆ : ವೆಬ್‌ಸೈಟ್